**SC No. 29/2025**
**PW-1**
**CW-1**

ಕರ್ನಾಟಕ ಸರ್ಕಾರ
(ಸಿ.ಆರ್.ಪಿ.67)

ಹೇಳಿಕೆ ಹಾಳೆ
(ಆರ್.ಪಿ.ಸಂಖ್ಯೆ: 57)
ನಮೂನೆ ಸಂಖ್ಯೆ: 4

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರ ನ್ಯಾಯಾಲಯದಲ್ಲಿ, ಬೆಳಗಾವಿ.**

ಎಸ್.ಸಿ ನಂ: **29/2025**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ರೇಣುಕಾ ಮಾಸೇಕರ | ಪ್ರಾಸಾ: 1 |
| ಗಂಡನ ಹೆಸರು | : | ಸಿದ್ದರಾಜು ಮಾಸೇಕರ | ಚಾಸಾ: 1 |
| ವಯಸ್ಸು | : | 37 ವರ್ಷ | ದಿನಾಂಕ 09.06.2026 ರಂದು ಸಾಕ್ಷಿದಾರರಿಗೆ ಸತ್ಯಪ್ರತಿಜ್ಞೆಯನ್ನು ಬೋಧಿಸಲಾಯಿತು. |
| ಉದ್ಯೋಗ | : | ಖಾಸಗಿ ನೌಕರಿ | |
| ವಾಸಸ್ಥಳ | : | ಶಹಪೂರ, ಬೆಳಗಾವಿ | |

**ಮುಖ್ಯವಿಚಾರಣೆ: ಮಾನ್ಯ ಸರ್ಕಾರಿ ಅಭಿಯೋಜಕರಿಂದ:**

ಚಾಸಾ-9 ನನ್ನ ಮಗ. ನನಗೆ ಚಾಸಾ 4 ರಿಂದ 8 ಮತ್ತು 10 ಇವರ ಪರಿಚಯ ಇರುವುದಿಲ್ಲ. ನನಗೆ ಆರೋಪಿತರ ಪರಿಚಯ ಇರುವುದಿಲ್ಲ. ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಆರೋಪಿತರು ಮತ್ತು ಚಾಸಾ 4,5, 9 ಮತ್ತು 10 ಇವರ ನಡುವೆ ಗಲಾಟೆಯಾಗಿರುವುದನ್ನು ನಾನು ನೋಡಿಲ್ಲ. ಆರೋಪಿತರು ನನಗೆ ಅವಾಚ್ಯ ಶಬ್ದಗಳಿಂದ ಬೈದಿಲ್ಲ ಮತ್ತು ಹಲ್ಲೆ ಮಾಡಿ ಕೊಲೆ ಬೆದರಿಕೆ ಹಾಕಿಲ್ಲ. ಆರೋಪಿತರು ಈ ಕೃತ್ಯಗಳನ್ನು ಮಾಡಿದ್ದರು ಎಂದು ನಾನು ಯಾವುದೇ ಪಿರ್ಯಾದಿಯನ್ನು ಕೊಟ್ಟಿಲ್ಲ. ಈಗ ನನಗೆ ತೋರಿಸಿದ ಪಿರ್ಯಾದಿಯಲ್ಲಿ ನನ್ನ ಸಹಿ ಇದೆ. ಆ

ಫಿರ್ಯಾದಿಯನ್ನು ನಿ.ಪಿ.1 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.1(ಎ) ಎಂದು ಗುರುತಿಸಲಾಗಿದೆ. ನಿ.ಪಿ.1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೋಲಿಸರು ಘಟನಾ ಸ್ಥಳಕ್ಕೆ ಬಂದು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿ ವಸ್ತುಗಳನ್ನು ಅಮಾನತು ಪಡಿಸಿಕೊಂಡಿಲ್ಲ. ಈಗ ನನಗೆ ತೋರಿಸಿದ ಪಂಚನಾಮೆ ಮತ್ತು ಕಚ್ಚಾ ನಕಾಶೆಗಳಲ್ಲಿ ನನ್ನ ಸಹಿಗಳಿವೆ. ಆ ಪಂಚನಾಮೆಯನ್ನು ನಿ.ಪಿ.2 ಎಂದು ಮತ್ತು ಕಚ್ಚಾ ನಕಾಶೆಗಳನ್ನು ನಿ.ಪಿ.3 ಮತ್ತು 4 ಎಂದು ಮತ್ತು ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ನಿ.ಪಿ.2(ಎ), 3(ಎ) ಮತ್ತು 4(ಎ) ಎಂದು ಗುರುತಿಸಲಾಗಿದೆ .ನಿ.ಪಿ.2 ರಿಂದ 4 ರಲ್ಲಿ ಏನು ಬರೆದಿದೆ ಮತ್ತು ಅದಕ್ಕೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಈಗ ನನಗೆ ತೋರಿಸಿದ ಫೋಟೊಗಳಲ್ಲಿ ನಾನು ಇರುತ್ತೇನೆ .ಆಫೋಟೊಗಳನ್ನು ನಿ. ಪಿ.5ರಿಂದ 7 ಎಂದು ಗುರುತಿಸಲಾಗಿದೆ. ಆ ಫೋಟೊಗಳನ್ನು ಏಕೆ ತೆಗೆದಿದ್ದರು ಎಂದು ನನಗೆ ಗೊತ್ತಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಪೋಲಿಸರ ಮುಂದೆ ಯಾವುದೇಮರು ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾ ರೆ. ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ಅಭಿಯೋಜನೆಯ ಪರ ಕೇಸಿಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿಯುವುದು ಕಂಡುಬರುತ್ತದೆ, ಈ ಕಾರಣದಿಂದ ಮಾನ್ಯ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ.)

ಪಾಟೀ ಸವಾಲುಃ  ಸರ್ಕಾರದ ಪರ ಮಾನ್ಯ ಅಭಿಯೋಜಕರಿಂದಃ

2. ದಿನಾಂಕ 23.05.2024 ರಂದು ಸಂಜೆ 05.30 ಗಂಟೆಗೆ ನನ್ನ ಮಗ ಚಾಸಾ 9 ಮತ್ತು 10 ರವರು ಅವರ ಗೆಳೆಯರೊಂದಿಗೆ ಶಹಪೂರದ ಅಳವನಗಲ್ಲಿಯಲ್ಲಿರುವ ಮರಾಠಿ ಶಾಲೆಯ ಬಳಿ ಕ್ರಿಕೇಟ ಆಡುತ್ತಿದ್ದ ಕಾಲಕ್ಕೆ ಆರೋಪಿತರು ಅಲ್ಲಿ ಬಂದು ಅವರೊಂದಿಗೆ ಜಗಳ ತೆಗೆದು ಅವಾಚ್ಯ ಶಬ್ದಗಳಿಂದ ಬೈದು ಆರೋಪಿತರು ಚಾಸಾ 9 ಮತ್ತು 10 ರವರಿಗೆ ಕೈಗಳಿಂದ, ಕಲ್ಲಿನಿಂದ ಮತ್ತು ವಿಕೇಟನಿಂದ ಹೊಡೆದು ಹಲ್ಲೆ ಮಾಡಿದ್ದರು ಎನ್ನುವುದು

ನಿಜವಲ್ಲ. ಈ ಘಟನೆಯ ವಿಷಯ ತಿಳಿದು ನಾನು, ಚಾಸಾ 4 ಮತ್ತು 5 ರವರು ಸ್ಥಳಕ್ಕೆ ಹೋದಾಗ ಆರೋಪಿತರು ಚಾಸಾ 5 ರವರಿಗೆ ಕತ್ತಿಯಿಂದ ಹೊಡೆದು ಹಲ್ಲೆ ಮಾಡಿದ್ದರು ಮತ್ತು ಚಾಸಾ 4 ರವರನ್ನು ಎಳೆದಾಡಿ ಆಕೆಯ ಮಾನಭಂಗ ಮಾಡಿದ್ದರು ಎನ್ನುವುದು ನಿಜವಲ್ಲ. ಬಳಿಕ ಆರೋಪಿತರು ನನಗೆ ಮತ್ತು ಚಾಸಾ 4, 5 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಕೊಲೆ ಬೆದರಿಕೆ ಹಾಕಿದ್ದರು ಎನ್ನುವುದು ನಿಜವಲ್ಲ.

3. ಈ ಬಗ್ಗೆ ನಾನು ಶಹಪೂರ ಪೋ.ಠಾಣೆಗೆ ಹೋಗಿ ನಿ.ಪಿ.1 ರಂತೆ ಒಂದು ಪಿರ್ಯಾದಿಯನ್ನು ಕೊಟ್ಟಿದ್ದೆ ಎನ್ನುವುದು ನಿಜವಲ್ಲ. ದಿ.24.05.2024 ರಂದು ಮಧ್ಯಾಹ್ನ 01.30 ಗಂಟೆಗೆ ಪೋಲಿಸರು ಘಟನಾ ಸ್ಥಳಕ್ಕೆ ಬಂದು ಚಾಸಾ 2 ಮತ್ತು 3 ಇವರ ಸಮಕ್ಷಮ ನಾನು ತೋರಿಸಿದ ಸ್ಥಳದಲ್ಲಿ ನಿ.ಪಿ.2 ರಂತೆ ಪಂಚನಾಮಾ ಕ್ರಮವನ್ನು ಜರುಗಿಸಿ ಕೃತ್ಯಕ್ಕೆ ಸಂಬಂಧಪಟ್ಟ ಒಂದು ತಲವಾರು, ಕ್ರಿಕೇಟ ಸ್ಟಂಪ ಮತ್ತು ಕಲ್ಲನ್ನು ಅಮಾನತು ಪಡಿಸಿಕೊಂಡಿದ್ದರು ಎನ್ನುವುದು ನಿಜವಲ್ಲ. ಆ ಪಂಚನಾಮೆಯ ಕಾಲಕ್ಕೆಪೋಲಿಸರು ನಿ.ಪಿ.3 ಮತ್ತು 4 ರಂತೆ ಸ್ಥಳಕ್ಕೆ ಕಚ್ಚಾ ನಕಾಶೆಯನ್ನು ತಯಾರಿಸಿ ನಿ.ಪಿ.5 ರಿಂದ 7 ರಂತೆ ಫೋಟೊಗಳನ್ನು ತೆಗೆದಿದ್ದರು ಎನ್ನುವುದು ನಿಜವಲ್ಲ.

4. ದಿ.24.05.2024 ರಂದು ನಾನು ಈ ಘಟನೆಗೆ ಸಂಬಂಧಪಟ್ಟಂತೆ ಪೋಲಿಸರ ಮುಂದೆ ನಿ.ಪಿ.8 ರಂತೆ ಒಂದು ಮರು ಹೇಳಿಕೆಯನ್ನು ಕೊಟ್ಟಿರುತ್ತೇನೆ ಎನ್ನುವುದು ನಿಜವಲ್ಲ. ಈಗ ನಾನು ಮತ್ತು ಆರೋಪಿತರು ರಾಜಿ ಮಾಡಿಕೊಂಡಿದ್ದೇವೆ ಎನ್ನುವುದು ನಿಜ. ಆ ಕಾರಣಕ್ಕಾಗಿ ನಾನು ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎನ್ನುವುದು ನಿಜವಲ್ಲ.

**SC No. 29/2025**
**PW-1**
**CW-1**

ಪಾಟೀ ಸವಾಲುಃ  ಆರೋಪಿತರ ಪರವಾಗಿಃ  ಶ್ರೀ ಎಸ್ ಎನ್ ಪಿ ವಕೀಲರಿಂದಃ

ಆರೋಪಿ ಪರ ವಕೀಲರು ಇಲ್ಲ ಎಂದು ಹೇಳುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದ ಮೂಲಕ ಬೆರಳಚ್ಚು  ಮಾಡಿಸಲಾಯಿತು.)

ಓ ಹೇ ಕೇ ಸರಿ ಇದೆ,

(ಮಂಜುನಾಥ ನಾಯಕ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಬೆಳಗಾವಿ.